ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ ಅಂಕೋಲಾ

ಸಿಸಿ ನಂಬರ. 77/2018

ಸಿ ಡಬ್ಲ್ಯೂ-2

ಪಿ ಡಬ್ಲ್ಯೂ-1

ದಿಃ 02-08-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

| | |
|---|---|
| ಸಾಕ್ಷಿಯ ಹೆಸರುಃ | ಸಂತೋಷ ತಳೇಕರ |
| ತಂದೆಯ ಹೆಸರುಃ | ನೂನಾ |
| ವಯಸ್ಸುಃ | 44 ವರ್ಷ |
| ಉದ್ಯೋಗಃ | ರೈತಾಬಿ |
| ವಿಳಾಸಃ | ಹೆಬ್ಬುಳ, ಅಂಕೋಲಾ. |

ಮುಖ್ಯ ವಿಚಾರಣೆಃ ಮಾನ್ಯ ಎ ಪಿ ಪಿ ರವರಿಂದಃ

ನನಗೆ ಚಾಸಾ-3 ರವರ ಪರಿಚಯ ಇರುವುದಿಲ್ಲ. ಅಂದಾಜು 6-7 ವರ್ಷಗಳ ಹಿಂದೆ ಪೊಲೀಸರು ಠಾಣೆಯಲ್ಲಿ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ. ಯಾವ ವಿಷಯಕ್ಕೆ ತೆಗೆದುಕೊಂಡಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ. ಎಷ್ಟು ಸಹಿ ಮಾಡಿರುತ್ತೇನೆ ಎಂದು ನೆನಪಿರುವುದಿಲ್ಲ. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ ಸಾಕ್ಷಿಯು ಅದರ ಮೇಲಿರುವ ಸಹಿಯನ್ನು ಗುರುತಿಸಿದ್ದು, ಸದರಿ ದಾಖಲಾತಿ ಸ್ಥಳ ಪಂಚನಾಮೆಯಾಗಿದ್ದು, ಅದನ್ನು ನಿಪಿ-1 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-1ಎ ಎಂದು ಗುರುತಿಸಲಾಯಿತು. ಎಷ್ಟು ಗಂಟೆಗೆ ಸಹಿ ಪಡೆದುಕೊಂಡಿರುತ್ತಾರೆ ಎಂದು ಹೇಳಲು ಆಗುವುದಿಲ್ಲ. ಸಾಕ್ಷಿಯು ನಕಾಶೆಯ

ಮೇಲಿರುವ ತಮ್ಮ ಸಹಿ ನೋಡಿ ಗುರುತಿಸಿದ್ದು, ನಕಾಶೆಯನ್ನು ನಿಪಿ-2, ಸಾಕ್ಷಿಯ ಸಹಿಯನ್ನು ನಿಪಿ-2ಎ ಎಂದು ಗುರುತಿಸಲಾಯಿತು. ಸಾಕ್ಷಿಗೆ ವಾಹನ ಪಂಚಾಮೆಯ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-3 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-3 ಎ ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಎ.ಪಿ.ಪಿ. ಇವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟಿ ಸವಾಲಿಗೆ ಅನುಮತಿ ಕೋರಿದ್ದು, ಅನುಮತಿಸಲಾಯಿತು.)

<u>ಪಾಟಿ ಸವಾಲುಃ</u> ಮಾನ್ಯ ಎ.ಪಿ.ಪಿ.ಯವರಿಂದ

2. ದಿಃ 30-10-2017 ರಂದು ನೀವು ಸುಂಕಾಸಾಳ ಗ್ರಾಮದ ಪದ್ಮಾಪುರ ಹೆಗ್ಗಾರ್ಗದಲ್ಲಿ ಅಪಘಾತದ ವಿಷಯವಾಗಿ ಪೊಲೀಸರ ಜೊತೆಗೆ ಪಂಚನಾಮೆಗೆಂದು ಹೋಗಿರುತ್ತೀರಿ ಎಂದರೆ ಸರಿಯಲ್ಲ. ಪಂಚನಾಮೆಯನ್ನು ಬೆಳಿಗ್ಗೆ 10.30 ರಿಂದ 11.30 ಗಂಟೆಯವರೆಗೆ ಜರುಗಿಸಲಾಯಿತು ಎಂದರೆ ಸರಿಯಲ್ಲ. ಪಂಚನಾಮೆಗೆ ಸ್ಥಳವನ್ನು ಚಾಸಾ-1 ರವರು ತೋರಿಸಿರುತ್ತಾರೆ ಎಂದರೆ ಸರಿಯಲ್ಲ. ಈ ಅಪಘಾತ ಸ್ಥಳಕ್ಕೆ ಸಂಬಂಧಪಟ್ಟಂತೆ ನಕಾಶೆಯನ್ನೂ ಸಹ ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿಯು ತಾವು ಇರುವ ಒಟ್ಟು 8 ಪೊಟೋಗಳನ್ನು ಗುರುತಿಸಿದ್ದು, ಪೊಟೋಗಳನ್ನು ನಿಪಿ-4 ರಿಂದ 9 ಎಂದು ಗುರುತಿಸಲಾಯಿತು. ಅದೇ ದಿನ ನೀವು ವಾಹನ ಪಂಚನಾಮೆಗೂ ಸಹ ಪೊಲೀಸ್ ಠಾಣೆಗೆ ಹೋಗಿರುತ್ತೀರಿ ಎಂದರೆ ನೆನಪಿರುವುದಿಲ್ಲ. ಅಪಘಾತಕ್ಕೆ ಒಳಪಡಿಸಿದ ಲಾರಿ ನಂ. ಕೆ ಎಲ್ 05/ಎ ಎಂ 8298 ಆಗಿತ್ತು ಎಂದರೆ ಸರಿಯಲ್ಲ. ಅಪಘಾತಕ್ಕೆ ಒಳಪಟ್ಟ ಮೋಟರ್ ಸೈಕಲ್ ನಂ. ಕೆ ಎ 31/ ಡಬ್ಲ್ಯೂ-

8074 ಆಗಿತ್ತು ಎಂದರೆ ಸರಿಲ್ಲ. ನಿಮಗೆ ಪಂಚನಾಮೆಗಳ ಸಂಪೂರ್ಣ ಮಾಹಿತಿ ಇದ್ದು, ಸ್ಥಳ ಪಂಚನಾಮೆ ಹಾಗೂ ವಾಹನ ಪಂಚನಾಮೆಗೆ ಹೋಗಿರುತ್ತಿರಿ ಎಂದರೆ ಸರಿಯಲ್ಲ. ಅವುಗಳಿಗೆ ಸಂಬಂಧಪಟ್ಟಂತೆ ನಕಾಶೆ ಮತ್ತು ಪೊಟೋಗಳನ್ನು ಸಹ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೀರಿ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ</u> ಆರೋಪಿ ಪರ ವಕೀಲರಾದ ಶ್ರೀ ಡಿ.ಎನ್.ಎನ್ ಇವರಿಂದಃ

ನೀವು ಅಂಕೋಲಾ ಪೊಲೀಸರ ಹೇಳಿಕಯ ಮೇರೆಗೆ ಸುಮಾರು 50-100 ಪ್ರಕರಣಗಳಲ್ಲಿ ಸಹಿ ಹಾಕಿರುತ್ತೀರಿ ಎಂದರೆ ಸರಿ. ಈ ಪ್ರಕರಣದಲ್ಲಿ ಯಾವ ಕಾಣಕ್ಕಾಗಿ ಸಹಿ ಹಾಕಿರುತ್ತೀರಿ ಎಂದು ನಿಮಗೆ ಮಾಹಿತಿ ಇರುವುದಿಲ್ಲ ಎಂದರೆ ಸರಿಯಲ್ಲ.

<u>ಮರುವಿಚಾರಣೆ:</u> ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಗಿದೆ).

ಓ ಹೇ ಕೇ ಸರಿ ಇದೆ

C/c. ಹೆಚ್ಚುವರಿ ಜೆ.ಎಂ.ಎಫ್.ಸಿ., ಅಂಕೋಲಾ.